**Akashvani : Bangalore**
**Regional Bulletin In Kannada**
**10.06.2026 / 18.40 hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

---

ಮುಖ್ಯಾಂಶಗಳು

೧. ಸಚಿವ ಸಂಪುಟ ವಿಸ್ತರಣೆ ಹಿನ್ನೆಲೆ ; ನವದೆಹಲಿಯಲ್ಲಿ ವರಿಷ್ಠರೊಂದಿಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಚರ್ಚೆ

೨. ಬೆಂಗಳೂರಿನಲ್ಲಿ ಕಸ ಸಂಸ್ಕರಣೆ ನೆಪದಲ್ಲಿ ೩೯ ಸಾವಿರ ಕೋಟಿ ರೂಪಾಯಿ ಹಗರಣ ; ರಾಜ್ಯಪಾಲರಿಗೆ ಬಿಜೆಪಿ ದೂರು

೩. ನವದೆಹಲಿಯಲ್ಲಿ ನಾಳೆ ನೀತಿ ಆಯೋಗದ ಸಭೆ ; ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಭಾಗಿ

೪. ಮುಂದಿನ ೫ ದಿನ ರಾಜ್ಯದ ಹಲವೆಡೆ ಬಿರುಗಾಳಿ ಸಹಿತ ಭಾರೀ ಮಳೆ ; ಹವಾಮಾನ ಇಲಾಖೆ ಮುನ್ಸೂಚನೆ

---

ಖಾತೆ ಹಂಚಿಕೆ ಕುರಿತಂತೆ ಅಸಮಧಾನ ಉಂಟಾಗಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನವದೆಹಲಿಯಲ್ಲಿ ಇಂದು ಪಕ್ಷದ ವರಿಷ್ಠರನ್ನು ಭೇಟಿಯಾಗಿ ಚರ್ಚೆ ನಡೆಸಿದ್ದಾರೆ. ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ ಬಳಿಕ ಇದೇ ಮೊದಲ ಬಾರಿಗೆ ನವದೆಹಲಿ ಪ್ರವಾಸ ಕೈಗೊಂಡಿರುವ ಅವರು, ಕಾಂಗ್ರೆಸ್ ಹಿರಿಯ ನಾಯಕಿ ಸೋನಿಯಾಗಾಂಧಿ, ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಹಾಗೂ ಎಐಸಿಸಿ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕ ಗಾಂಧಿ ಅವರನ್ನು ಭೇಟಿಯಾಗಿ ಧನ್ಯವಾದ ಸಲ್ಲಿಸಿದ್ದಾರೆ.

ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಸಚಿವ ಕೆ.ಎಚ್.ಮುನಿಯಪ್ಪ ಅವರು, ದೆಹಲಿಯಲ್ಲಿದ್ದು, ಖಾತೆ ಬದಲಾವಣೆಗೆ ಒತ್ತಾಯಿಸುತ್ತಿದ್ದಾರೆ ಎಂದು ಐಎಎನ್ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ. ಈ ನಡುವೆ ಕೃಷಿ ಸಚಿವ ಕೃಷ್ಣ ಬೈರೇಗೌಡ ಅವರು, ಬೆಂಗಳೂರು ನಗರಾಭಿವೃದ್ಧಿ ಖಾತೆಗೆ ಬಿಡಿಎ ಹಾಗೂ ಬಿಎಂಆರ್‌ಡಿಎ ಸೇರಿಸುವಂತೆ ಪಟ್ಟು ಹಿಡಿದಿದ್ದು, ನವದೆಹಲಿಯಲ್ಲಿ ಪಕ್ಷದ ವರಿಷ್ಠರನ್ನು ಭೇಟಿಯಾಗಲು ನಿರ್ಧರಿಸಿದ್ದಾರೆ.

---

ಕಾಂಗ್ರೆಸ್ ಸರ್ಕಾರ ಬೆಂಗಳೂರಿನಲ್ಲಿ ಕಸ ಸಂಸ್ಕರಣೆ ಮಾಡುವ ನೆಪದಲ್ಲಿ ೩೯ ಸಾವಿರದ ೪೩೭ ಕೋಟಿ ರೂಪಾಯಿ ಹಗರಣ ನಡೆಸಿದೆ ಎಂದು ಬಿಜೆಪಿ ಆರೋಪಿಸಿದೆ.

ಟೆಂಡರ್‌ನ ಒಟ್ಟು ಮೊತ್ತದಲ್ಲಿ ೧೦ ಸಾವಿರ ಕೋಟಿ ರೂಪಾಯಿ ಕಿಕ್‌ಬ್ಯಾಕ್ ಪಡೆಯಲಾಗಿದೆ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ ಆರೋಪಿಸಿದ್ದು, ಈ ಕುರಿತಂತೆ ರಾಜ್ಯಪಾಲರಿಗೆ ದೂರು ಸಲ್ಲಿಸಿದ್ದಾರೆ. ದೂರಿನಲ್ಲಿ ನಿಷ್ಪಕ್ಷಪಾತ ತನಿಖೆ ನಡೆಸುವಂತೆ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಗಿದೆ. ಬಳಿಕ ಮಾತನಾಡಿದ ಅವರು, ಜನರ ತೆರಿಗೆ ಹಣದ ಲೂಟಿ, ಟೆಂಡರ್ ಪ್ರಕ್ರಿಯೆಯಲ್ಲಿನ ಅಕ್ರಮ ಹಾಗೂ ಸರ್ಕಾರದ ಪಾತ್ರದ ಕುರಿತು ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಲಾಯಿತು ಎಂದು ತಿಳಿಸಿದ್ದಾರೆ.

---

ನವದೆಹಲಿಯಲ್ಲಿ ನಾಳೆ ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ನೀತಿ ಆಯೋಗದ ಆಡಳಿತ ಮಂಡಳಿ ಸಭೆ ನಡೆಯಲಿದೆ. ಸಭೆಯಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಭಾಗವಹಿಸಲಿದ್ದು, ಉನ್ನತ ಅಧಿಕಾರಿಗಳನ್ನು ಭೇಟಿ ಮಾಡಲಿದ್ದಾರೆ. ಸಭೆಯಲ್ಲಿ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳ ಮುಖ್ಯಮಂತ್ರಿಗಳು ಭಾಗವಹಿಸಲಿದ್ದಾರೆ. ಡಿಸೆಂಬರ್‌ನಲ್ಲಿ ನಡೆದ ೫ನೇ ರಾಷ್ಟ್ರೀಯ ಮುಖ್ಯ ಕಾರ್ಯದರ್ಶಿಗಳ ಸಮ್ಮೇಳನದ ಶಿಫಾರಸ್ಸುಗಳಾದ ಆರಂಭಿಕ ಬಾಲ್ಯ ಶಿಕ್ಷಣ, ಶಾಲಾ ಶಿಕ್ಷಣ, ಕೌಶಲ್ಯ, ಉನ್ನತ ಶಿಕ್ಷಣ, ಕ್ರೀಡೆ ಮತ್ತು ಪಠ್ಯೇತರ ಚಟುವಟಿಕೆಗಳ ಕುರಿತಂತೆ ಚರ್ಚೆ ನಡೆಯಲಿದೆ.

---

ಮಧ್ಯಪ್ರದೇಶದಲ್ಲಿ ಮೀನಾಕ್ಷಿ ನಟರಾಜನ್ ನಾಮಪತ್ರ ತಿರಸ್ಕೃತವಾಗಿರುವುದು ಚುನಾವಣಾ ಅಕ್ರಮವಾಗಿದೆ ಎಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪಿಸಿದ್ದಾರೆ. ಈ ಕುರಿತಂತೆ ಪತ್ರಿಕಾ ಪ್ರಕಟಣೆ ಹೊರಡಿಸಿರುವ ಅವರು, ಮೀನಾಕ್ಷಿ ನಟರಾಜನ್ ನಾಮಪತ್ರ ಸಲ್ಲಿಕೆ ಪ್ರಕ್ರಿಯೆಯಲ್ಲಿ ಯಾವುದೇ ಲೋಪದೋಷಗಳಿರಲಿಲ್ಲ. ಆದರೂ ಕೆಲವು ಲೋಪದೋಷಗಳನ್ನು ಸೃಷ್ಟಿ ಮಾಡಿ ತಿರಸ್ಕಾರ ಮಾಡಲಾಗಿದೆ ಎಂದು ದೂರಿದ್ದಾರೆ. ಇದು ಚುನಾವಣಾ ಅಕ್ರಮ ಹಾಗೂ ರಾಜಕೀಯ ಷಡ್ಯಂತ್ರ ಎಂದು ಅಸಮಾಧಾನ ವ್ಯಕ್ತಪಡಿಸಿದರು.

---

ದೇಶದ ಪ್ರಮುಖ ರಾಷ್ಟ್ರೀಯ ತಂತ್ರಜ್ಞಾನ ಸಮಾವೇಶವಾದ ರೈಸ್ ಕಾನ್‌ಕ್ಲೇವ್-೨೦೨೬ ಇದೇ ೧೩ ಮತ್ತು ೧೪ರಂದು ಬೆಂಗಳೂರಿನಲ್ಲಿ ನಡೆಯಲಿದೆ. ಸಮಾವೇಶಕ್ಕೆ ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಜಿತೇಂದ್ರ ಸಿಂಗ್ ಚಾಲನೆ ನೀಡಲಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಸಿಎಸ್‌ಐಆರ್-ಎನ್‌ಎಎಲ್ ನಿರ್ದೇಶಕ ಡಾ.ಅಭಯ್ ಎ ಪಶೀಲ್ಕರ್ ಮಾತನಾಡಿ, ಈ ಬಾರಿಯ ಬೆಂಗಳೂರು ಆವೃತ್ತಿಯು ವಿಕಸಿತ ಭಾರತ -೨೦೪೭ಕ್ಕಾಗಿ ನಾವೀನ್ಯತೆ ಮತ್ತು ಉದ್ಯಮಶೀಲತೆ ಆಧಾರಿತ ಬೆಳವಣಿಗೆ ಎಂಬ ವಿಶೇಷ ಧ್ಯೇಯವಾಕ್ಯದೊಂದಿಗೆ ನಡೆಯಲಿದೆ. ಸಮಾವೇಶದಲ್ಲಿ ಏರೋಸ್ಪೇಸ್ ತಂತ್ರಜ್ಞಾನಗಳ ಬೆಳವಣಿಗೆ, ಎಲ್ಲರಿಗೂ ಕೃತಕಬುದ್ಧಿಮತ್ತೆ, ಕೃಷಿ, ಆಹಾರ, ಮಾರುಕಟ್ಟೆ ಸಂಪರ್ಕ ಕ್ಷೇತ್ರಗಳ ಮೇಲೆ ಗಂಭೀರ ಚರ್ಚೆ ನಡೆಯಲಿದೆ. ಸಮಾವೇಶದಲ್ಲಿ ದೇಶ-ವಿದೇಶಗಳ ಹಲವು ಕಂಪನಿಗಳು ಭಾಗಿಯಾಗಲಿವೆ ಎಂದು ತಿಳಿಸಿದ್ದಾರೆ.

---

ಕೇಂದ್ರ ಚುನಾವಣಾ ಆಯೋಗವು ಭಾರತೀಯ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ಮತ್ತು ಚುನಾವಣಾ ನಿರ್ವಹಣಾ ಸಂಸ್ಥೆ, ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ಮತ್ತು ಚುನಾವಣಾ ಸಹಾಯ ಸಂಸ್ಥೆ ಹಾಗೂ ಮುಖ್ಯ ಚುನಾವಣಾಧಿಕಾರಿಗಳ ಕಚೇರಿಯ ಸಹಯೋಗದೊಂದಿಗೆ, ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ "ತಂತ್ರಜ್ಞಾನ ಚಾಲಿತ ಮತದಾರರ ನೋಂದಣಿ" ಕುರಿತ ಒಂದು ದಿನದ ಅಂತಾರಾಷ್ಟ್ರೀಯ ಕಾರ್ಯಾಗಾರ ಆಯೋಜಿಸಿತ್ತು.

ಮುಖ್ಯ ಚುನಾವಣಾಧಿಕಾರಿ ವಿ. ಅನ್ಬು ಕುಮಾರ್ ಅಧ್ಯಕ್ಷತೆಯಲ್ಲಿ ನಡೆದ ಈ ಕಾರ್ಯಾಗಾರವು, ಮತದಾರರ ನೋಂದಣಿ ಪ್ರಕ್ರಿಯೆಯಲ್ಲಿ ತಂತ್ರಜ್ಞಾನದ ಅಳವಡಿಕೆ ಮತ್ತು ನಾವೀನ್ಯತೆಗಳ ಕುರಿತು ಜಾಗತಿಕ ಮಟ್ಟದ ಚರ್ಚೆಗೆ ವೇದಿಕೆಯಾಯಿತು. ಕಾರ್ಯಾಗಾರದಲ್ಲಿ ತಜ್ಞರು ವಿವಿಧ ಮಾದರಿಗಳ ಕುರಿತು ಪ್ರಸ್ತುತಿ ನೀಡಿದರು.

ಈ ಕಾರ್ಯಾಗಾರವು ಭವಿಷ್ಯದ ಚುನಾವಣಾ ಪ್ರಕ್ರಿಯೆಗಳನ್ನು ಹೆಚ್ಚು ಪಾರದರ್ಶಕ, ಸುಲಭ ಮತ್ತು ತಂತ್ರಜ್ಞಾನ ಆಧಾರಿತವಾಗಿ ರೂಪಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯಾಗಿದೆ.

---

ಕೊಡಗು ಜಿಲ್ಲೆಯ ಪ್ರಮುಖ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಕೇಂದ್ರ ಸರ್ಕಾರದಿಂದ ಸಿಆರ್‌ಎಫ್ ಯೋಜನೆಯಡಿ ೨೨ ಕೋಟಿ ರೂಪಾಯಿ ಮಂಜೂರಾಗಿದೆ.

ಇದನ್ನು ಸ್ವಾಗತಿಸಿರುವ ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಈ ರಸ್ತೆಗಳು ಕೊಡಗು ಜಿಲ್ಲೆಯ ನಿವಾಸಿಗಳು, ರೈತರು, ವಿದ್ಯಾರ್ಥಿಗಳು, ಪ್ರವಾಸಿಗರು ಹಾಗೂ ವ್ಯಾಪಾರ ವಲಯದವರಿಗೆ ಅತ್ಯಂತ ಪ್ರಮುಖ ಸಂಪರ್ಕ ಮಾರ್ಗಗಳಾಗಿವೆ ಎಂದು ತಿಳಿಸಿದ್ದಾರೆ.

ಕೊಡಗಿನ ಬಹುಕಾಲದ ರಸ್ತೆ ಅಭಿವೃದ್ಧಿ ಅಗತ್ಯಗಳಿಗೆ ಸ್ಪಂದಿಸಿದ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವರಾದ ನಿತಿನ್ ಗಡ್ಕರಿ ಅವರಿಗೆ ಕೃತಜ್ಞತೆ ಸಲ್ಲಿಸಿದ್ದಾರೆ.

---

ಚುನಾವಣಾ ಆಯೋಗದ ನಿರ್ದೇಶನದಂತೆ  ಗದಗ ಜಿಲ್ಲೆಯಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ನಡೆಸಲಾಗುತ್ತಿದೆ. ಈಗಾಗಲೇ ಶೇಕಡ ೯೪.೧೪ ರಷ್ಟು ಮತದಾರರ ಮ್ಯಾಪಿಂಗ್ ಪೂರ್ಣಗೊಳಿಸಲಾಗಿದೆ ಎಂದು ಗದಗ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದ್ದಾರೆ. ಜಿಲ್ಲೆಯಲ್ಲಿ ಎಸ್‌ಐಆರ್ ಪ್ರಕ್ರಿಯೆಯನ್ನು ವ್ಯವಸ್ಥಿತವಾಗಿ ಅನುಷ್ಠಾನಗೊಳಿಸಲು ಎಲ್ಲಾ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ.

ಸಾರ್ವಜನಿಕರಲ್ಲಿ ಉಂಟಾಗಿರುವ ಗೊಂದಲ ನಿವಾರಿಸಲು ಪಾರದರ್ಶಕವಾಗಿ ಎಸ್.ಐ.ಆರ್ ಪ್ರಕ್ರಿಯೆ ನಡೆಲಾಗುವುದು. ಅರ್ಹ ಯಾವೊಬ್ಬ ಮತದಾರನೂ ಪಟ್ಟಿಯಿಂದ ಹೊರಗುಳಿಯಬಾರದು, ಮತದಾನದ ಹಕ್ಕಿನಿಂದ ಯಾರೂ ವಂಚಿತರಾಗಬಾರದು ಎಂದು ತಿಳಿಸಿದ್ದಾರೆ.

---

೨೦೨೫ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಬೆಳೆ ಹಾನಿಗೆ ಒಳಗಾದ ಜಿಲ್ಲೆಯ ರೈತರಿಗೆ ೨೪೬.೯ ಕೋಟಿ ರೂಪಾಯಿ ಅತ್ಯಧಿಕ ಬೆಳೆ ವಿಮಾ ಪರಿಹಾರ ಲಭಿಸಿದೆ.

ಜಿಲ್ಲೆಯಲ್ಲಿ ಒಟ್ಟಾರೆ ೨೦ ಲಕ್ಷ ೨ ಸಾವಿರದ ೯೧ ರೈತರು ಬೆಳೆ ವಿಮೆಗೆ ಹೆಸರು ನೋಂದಾಯಿಸಿಕೊಂಡಿದ್ದು, ೧೨ ಲಕ್ಷ ೧ ಸಾವಿರದ ೭೭ ಹೆಕ್ಟೇರ್ ಪ್ರದೇಶ ವಿಮಾ ವ್ಯಾಪ್ತಿಗೆ ಒಳಪಟ್ಟಿತ್ತು.

ಈ ತಿಂಗಳ ಅಂತ್ಯದೊಳಗೆ ೫೧ ಕೋಟಿ ರೂಪಾಯಿ ಅಧಿಕ ಪರಿಹಾರ ಜಿಲ್ಲೆಯ ಎಲ್ಲಾ ತಾಲೂಕಿನ ಅರ್ಹ ರೈತರ ಖಾತೆಗಳಿಗೆ ಹಂತ ಹಂತವಾಗಿ ಜಮಾ ಆಗಲಿದೆ.

---

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮುಂಗಾರು ಮಳೆ ಚುರುಕು ಪಡೆದಿದ್ದು, ಕಳೆದ ಎರಡು ದಿನಗಳಿಂದ ಸತತವಾಗಿ ಮಳೆ ಸುರಿಯುತ್ತಿದೆ. ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದಾಗಿ ಬತ್ತಿ ಹೋಗಿದ್ದ ನೇತ್ರಾವತಿ, ಕುಮಾರಧಾರ, ಫಲ್ಗುಣಿ ನದಿಗಳಲ್ಲಿ ನೀರಿನ ಹರಿವು ಕಂಡು ಬರುತ್ತಿದೆ. ಕೃಷಿ ಚಟುವಟಿಕೆಗಳು ಕೂಡ ಬಿರುಸಿನಿಂದ ಸಾಗುತ್ತಿದ್ದು, ರೈತರು ಮುಂಗಾರು ಬಿತ್ತನೆಗಾಗಿ ಗದ್ದೆಗಳನ್ನು ಹಸನುಗೊಳಿಸುತ್ತಿದ್ದಾರೆ.

ಗಾಳಿ ಮಳೆಯಿಂದಾಗಿ ಜಿಲ್ಲೆಯಲ್ಲಿ ಮೇ ೩೧ರಿಂದ ನಿನ್ನೆಯವರೆಗೆ ಒಟ್ಟು ೨೮೦ ಮನೆಗಳಿಗೆ ಹಾನಿ ಉಂಟಾಗಿದೆ. ಈ ಪೈಕಿ ೪ ಮನೆಗಳು ಸಂಪೂರ್ಣ ಕುಸಿದಿವೆ. ೨೭೬ ಮನೆಗಳು ಭಾಗಶಃ ಹಾನಿಗೊಳಗಾಗಿವೆ. ೬೭೨ ವಿದ್ಯುತ್ ಕಂಬಗಳು ಧರೆಗುರುಳಿವೆ ಎಂದು ಜಿಲ್ಲಾಡಳಿತ ಮಾಹಿತಿ ನೀಡಿದೆ

---

ಸಂಕ್ಷಿಪ್ತ ಸುದ್ದಿಗಳು

೧. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದ ಕೋಳೂರು ಗ್ರಾಮದಲ್ಲಿ ಕೃಷಿ ಇಲಾಖೆಯ ವತಿಯಿಂದ ಕೇಂದ್ರ ಪುರಸ್ಕೃತ ಆತ್ಮ ಯೋಜನೆಯಡಿ ಖೇತ್ ಬಚಾವೋ ಅಭಿಯಾನದ ಅಂಗವಾಗಿ ಸಮತೋಲಿನ ರಸಗೊಬ್ಬರಗಳ ಬಳಕೆ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

೨. ಕೊಂಕಣ ರೈಲ್ವೆ ವಿಭಾಗದ ಕಾರವಾರ ರೈಲ್ವೆ ನಿಲ್ದಾಣದಲ್ಲಿ ಮಹಿಳಾ ಪ್ರಯಾಣಿಕರಿಗಾಗಿ ಪ್ರತ್ಯೇಕವಾಗಿ 'ಪಿಂಕ್ ಬಬಲ್' ವಿಶ್ರಾಂತಿ ಆಸನ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. ನಾಳೆ ಈ ವಿಶೇಷ ಆಸನ ವ್ಯವಸ್ಥೆಯನ್ನು ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಮತ್ತು ಕೆಎಸ್‌ಎಂಸಿಎ ಅಧ್ಯಕ್ಷ ಹಾಗೂ ಶಾಸಕರ ಸತೀಶ್ ಸೈಲ್ ಜಂಟಿಯಾಗಿ ಉದ್ಘಾಟಿಸಲಿದ್ದಾರೆ.

೩. ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ನಿಗಾ ವಹಿಸಬೇಕು. ಜಾನುವಾರುಗಳ ಮೇವಿನ ಸಮಸ್ಯೆಗೆ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಕೋಲಾರ ಶಾಸಕ ಕೊತ್ತೂರು ಜಿ. ಮಂಜುನಾಥ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

---

ಇನ್ನು ಹವಾವರ್ತಮಾನ,

ಕರಾವಳಿ ಕರ್ನಾಟಕ ಮತ್ತು ದಕ್ಷಿಣ ಒಳನಾಡಿನಲ್ಲಿ ನೈಋತ್ಯ ಮುಂಗಾರು ಸಾಮಾನ್ಯವಾಗಿತ್ತು. ಮುಂದಿನ ೫ ದಿನಗಳ ಕಾಲ ರಾಜ್ಯದ ಹಲವೆಡೆ ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಕರಾವಳಿ ಜಿಲ್ಲೆಗಳಲ್ಲಿ ನಿರಂತರ ಗಾಳಿಯೊಂದಿಗೆ ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕರಾವಳಿ ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದೆ.

ಉತ್ತರ ಒಳನಾಡು ಹಾಗೂ ದಕ್ಷಿಣ ಒಳನಾಡು ಜಿಲ್ಲೆಗಳಲ್ಲಿಯೂ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

__________ ಮುಕ್ತಾಯ _________